## ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ನಡವಳಿಗಳು

ವಿಷಯ : Novel Coronavirus (COVID-19) ನ ವೈರಸ್ ಸೋಂಕು ತಡೆಗುಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ: 1. ಈ ಕಛೇರಿಯ ಸಮ ಸಂಖ್ಯೆ ಆದೇಶ ದಿನಾಂಕ: 14.03.2020 ಮತ್ತು 21.03.2020.

2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆದೇಶ ಸಂಖ್ಯೆ: HFW 54 CGM 2020 ದಿನಾಂಕ: 23.03.2020 ಮತ್ತು ವಿಸ್ತರಣಾ ಆದೇಶ ದಿನಾಂಕ: 31.03.2020.

************

Novel Coronavirus (COVID-19) ನ ವೈರಸ್ ಸೋಂಕು ಹರಡುವಿಕೆಯನ್ನು ತಡೆಗಟ್ಟಲು ಈ ಕಛೇರಿಯಿಂದ ಉಲ್ಲೇಖ-1 ರ ದಿನಾಂಕ: 21.03.2020 ರ ಆದೇಶದಲ್ಲಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಎಲ್-2 ಹಾಗೂ ಸಿಎಲ್-11(ಸಿ) [MSIL Outlets] ಸನ್ನದುಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಮದ್ಯ ಮಾರಾಟ ಸನ್ನದುಗಳನ್ನು ದಿನಾಂಕ: 21.03.2020 ರ ಸಂಜೆ 4.00 ಗಂಟೆಯಿಂದ ದಿನಾಂಕ: 31.03.2020 ರ ಮಧ್ಯರಾತ್ರಿಯವರೆಗೆ ಮುಚ್ಚಲು ಆದೇಶಿಸಲಾಗಿತ್ತು. ಇನ್ನೂ ವೈರಸ್ ಸೋಂಕು ನಿಯಂತ್ರಣಕ್ಕೆ ಬಾರದಿರುವುದರಿಂದ ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳದೆ ಇದಲ್ಲಿ ವ್ಯಕ್ತಿಯಿಂದ ವ್ಯಕ್ತಿಗೆ ವೈರಸ್ ಸೋಂಕು ವ್ಯಾಪಕವಾಗಿ ಹರಡಬಹುದಾದ ಹಿನ್ನಲೆಯಲ್ಲಿ ಸರ್ಕಾರದ ಉಲ್ಲೇಖ-2 ರ ದಿನಾಂಕ: 31.03.2020 ರ ವಿಸ್ತರಣಾ ಆದೇಶದಲ್ಲಿ ಉಲ್ಲೇಖ-2 ರ ದಿನಾಂಕ: 23.03.2020 ರ ಆದೇಶದಲ್ಲಿ ವಿಧಿಸಲಾಗಿದ್ದ ನಿರ್ಬಂಧಗಳನ್ನು ದಿನಾಂಕ: 31.03.2020 ರ ಮಧ್ಯರಾತ್ರಿಯಿಂದ 14.04.2020 ರ ಮಧ್ಯರಾತ್ರಿಯವರೆಗೆ ರಾಜ್ಯವ್ಯಾಪಿ ಅನ್ವಯಿಸುವಂತೆ ನಿರ್ಬಂಧಗಳನ್ನು ಮುಂದುವರೆಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

**ಆದೇಶ ಸಂಖ್ಯೆ: ಇಸಿಇ/04/ಐ.ಕ್ರೈಂ/2019-20 ದಿನಾಂಕ: 31.03.2020**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಯಶವಂತ.ವಿ, ಭಾ.ಆ.ಸೇ., ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ ಆದ ನಾನು ಕರ್ನಾಟಕ ಅಬಕಾರಿ ಕಾಯ್ದೆ, 1965 ರ ಕಲಂ 21(1) ಮತ್ತು 3(2) ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ **ದಿನಾಂಕ: 01.04.2020 ರ 00.00 ಗಂಟೆಯಿಂದ ದಿನಾಂಕ: 14.04.2020 ರ ಮಧ್ಯರಾತ್ರಿಯವರೆಗೆ** ತಕ್ಷಣದಿಂದ ಜಾರಿಗೆ ಬರುವಂತೆ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮದ್ಯ ಮಾರಾಟ ಸನ್ನದುಗಳನ್ನು ಮುಚ್ಚಲು ಆದೇಶಿಸಿರುತ್ತೇನೆ.

ಈ ಆದೇಶವನ್ನು ಪರಿಪೂರ್ಣವಾಗಿ ಜಾರಿ ಮಾಡುವುದು, ಯಾವುದಾದರು ಲೋಪ ಕಂಡುಬಂದಲ್ಲಿ ವ್ಯಾಪ್ತಿಯ ಅಬಕಾರಿ ಉಪ ಆಯುಕ್ತರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಉಲ್ಲೇಖ-2 ರ ಆದೇಶಗಳಲ್ಲಿ ವಿಧಿಸಲಾಗಿರುವ ನಿರ್ಬಂಧಗಳನ್ನು ಮತ್ತು ಇತರೆ ಎಲ್ಲಾ ಸೂಚನೆಗಳನ್ನು ಕೂಡ ಕಡ್ಡಾಯವಾಗಿ ಪಾಲಿಸುವುದು.

ಅಬಕಾರಿ ಆಯುಕ್ತರು

**ಪ್ರತಿಯನ್ನು:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು ಇವರಿಗೆ ಮಾಹಿತಿಗಾಗಿ.
2. ಮಾನ್ಯ ಅಬಕಾರಿ ಸಚಿವರ ಆಪ್ತ ಕಾರ್ಯದರ್ಶಿಗಳು ಇವರಿಗೆ ಮಾಹಿತಿಗಾಗಿ.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
5. ಡೈರೆಕ್ಟರ್ ಜನರಲ್ & ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.

Scanned by CamScanner